ರಾಜ್ಯದ ವಿವಿಧ ಮಂಡಳಿಗಳಿಗೆ ತಾಂತ್ರಿಕ ಜ್ಞಾನವುಳ್ಳ ಅಧಿಕಾರಿಗಳ ನೇಮಕ.

1967. ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ವಿವಿಧ ಮಂಡಳಿಗಳು ಮತ್ತು ನಿಗಮಗಳಿಗೆ ಐಎಎಸ್ ಮತ್ತು ಐಪಿಎಸ್ ಅಧಿಕಾರಿಗಳನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಲು ಕಾರಣಗಳೇನು;

ಆ) ಸದರಿ ಅಧಿಕಾರಿಗಳ ತಾಂತ್ರಿಕ ಜ್ಞಾನದ ಕೊರತೆಯಿಂದ ಮಂಡಳಿಗಳ ಅಧ್ಯಕ್ಷತೆಯು ಹೆಚ್ಚುವುದಲ್ಲದೆ ನಷ್ಟಕ್ಕೆ ಕಾರಣವಾಗುತ್ತಿರುವುದು ಸರ್ಕಾರಕ್ಕೆ ತಿಳಿದಿದೆಯೇ;

ಇ) ತಾಂತ್ರಿಕ ಜ್ಞಾನವನ್ನು ಹೊಂದಿರುವವರನ್ನು ಅಧ್ಯಕ್ಷರನ್ನಾಗಿ ನೇಮಿಸಲು ಸರ್ಕಾರವು ನಿಯಮವೇನಾದರೂ ರಚಿಸುವುದೇ; ಹಾಗಿದ್ದಲ್ಲಿ ಯಾವಾಗ ರಚಿಸಿ ಈ ಬಗ್ಗೆ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು) :

ಅ) ಆಡಳಿತದ ಹಿತದೃಷ್ಟಿಯಿಂದ ಕೆಲವು ಮಂಡಳಿ ಮತ್ತು ನಿಗಮಗಳಲ್ಲಿ ಐಎಎಸ್ ಮತ್ತು ಐಪಿಎಸ್ ಅಧಿಕಾರಿಗಳನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆಯಾದರೂ. ಅವಶ್ಯಕತೆ ಇರುವ ಕಡೆ ತಂತ್ರಜ್ಞಾನ ಉಳ್ಳವರನ್ನೂ ಸಹ ವಿವಿಧ ಮಂಡಳಿ ಮತ್ತು ನಿಗಮಗಳಲ್ಲಿ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ.

ಆ) ಇಂತಹ ಯಾವ ನಿದರ್ಶನಗಳು ಇದುವರೆವಿಗೂ ಕಂಡುಬರುವುದಿಲ್ಲ.

ಇ) ಪ್ರಶ್ನೆ (ಅ) ಮತ್ತು (ಆ)ಗೆ ನೀಡಿರುವ ಉತ್ತರಗಳ ಮೇರೆಗೆ. ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಹುಬ್ಬಳ್ಳಿ-ಧಾರವಾಡ ಅವಳಿ ನಗರಗಳಲ್ಲಿ ಉಚ್ಚ ನ್ಯಾಯಾಲಯ ಪ್ರಾರಂಭ

1617. ಶ್ರೀ ಮಂಜುನಾಥ ಸಿ. ಕುನ್ನೂರು (ಶಿಗ್ಗಾಂವ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ-ಧಾರವಾಡ ಅವಳಿ ನಗರಗಳಲ್ಲಿ ಉಚ್ಚ ನ್ಯಾಯಾಲಯ ಪೀಠ (ಹೈಕೋರ್ಟ್ ಬೆಂಚ್) ಪ್ರಾರಂಭಿಸುವುದು ಸರ್ಕಾರದ ಗಮನದಲ್ಲಿದೆಯೆ:

ಆ) ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಈ ಬಗ್ಗೆ ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರದವರು ಸದರೀ ಉಚ್ಚ ನ್ಯಾಯಾಲಯ ಪೀಠ ಸ್ಥಾಪನೆ ಮಾಡಲು ಶಿಫಾರಸನ್ನು ಮಾಡಲಾಗಿದೆಯೆ?

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು) :

ಅ) ಉಚ್ಚ ನ್ಯಾಯಾಲಯದ ಪೀಠವನ್ನು ಇದರ ಕೇಂದ್ರ ಸ್ಥಾನದಿಂದ ಹೊರಗೆ ಸ್ಥಾಪಿಸುವ ಬಗೆಗಿನ ಪ್ರಸ್ತಾವನೆಗೆ ಉಚ್ಚ ನ್ಯಾಯಾಲಯದ ಒಪ್ಪಿಗೆ ಪಡೆಯಬೇಕಾಗಿದ್ದು. ಅದರಂತೆ ಉಚ್ಚ ನ್ಯಾಯಾಲಯದ ಒಪ್ಪಿಗೆಯನ್ನು ಕೋರಲಾಗಿತ್ತು. ಆದರೆ. ಈ ಪ್ರಸ್ತಾವನೆಗೆ ಉಚ್ಚ ನ್ಯಾಯಾಲಯವು ಒಪ್ಪಿಗೆ ನೀಡಿಲ್ಲ. ಈ ಬಗ್ಗೆ ಪತ್ರ ವ್ಯವಹಾರ ಮುಂದುವರೆದಿದೆ.